# ಕರ್ನಾಟಕ ವಿಧಾನ ಪರಿಷತ್ತು

1. ಸದಸ್ಯರ ಹೆಸರು : ಶ್ರೀ ಪಿ.ಆರ್. ರಮೇಶ್

2. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 728

3. ಉತ್ತರಿಸಬೇಕಾದ ದಿನಾಂಕ : 17-09-2021

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಇತ್ತೀಚೆಗೆ ರಾಜ್ಯದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕೂಲಿ ಕಾರ್ಮಿಕರ ಕೆಲಸಕ್ಕೆ ಸರಿಯಾಗಿ ವೇತನ ಪಾವತಿಯಾಗದೇ ವಿಳಂಬವಾಗಿರುವುದು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ರಾಜ್ಯ ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು) | ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕೆಲಸ ಮಾಡಿದ ಕೂಲಿಕಾರರಿಗೆ ನಿಗದಿತ ಕಾಲಮಿತಿಯೊಳಗೆ ಕೂಲಿ ಪಾವತಿಸಲಾಗುತ್ತಿದೆ. ಆಗಸ್ಟ್ ತಿಂಗಳಿನಲ್ಲಿ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಲ್ಲಿ ವಿಳಂಬವಾದ ಕಾರಣ ಕೂಲಿ ಪಾವತಿಯಲ್ಲಿ ವಿಳಂಬವಾಗಿತ್ತು. ಪ್ರಸ್ತುತ ಕೇಂದ್ರ ಸರ್ಕಾರವು ಅನುದಾನ ಬಿಡುಗಡೆ ಮಾಡಿದ್ದು, ಬಾಕಿ ಇದ್ದ ಕೂಲಿ ಹಣವನ್ನು ಪಾವತಿಸಲಾಗಿರುತ್ತದೆ. 2021-22ನೇ ಸಾಲಿನಲ್ಲಿ ಯೋಜನೆಯಲ್ಲಿ ಕೆಲಸ ಮಾಡಿದ ಕೂಲಿಕಾರರಿಗೆ ನಿಗದಿತ ಕಾಲಮಿತಿಯೊಳಗೆ ಕೂಲಿ ಪಾವತಿಸಿದ ಪ್ರಮಾಣವು (Timely wage Payment) ಶೇ. 99.66 ರಷ್ಟು ಇರುತ್ತದೆ. |
| ಆ | ಸದರಿ ಯೋಜನೆಯಡಿಯಲ್ಲಿ ಕೂಲಿ ಕಾರ್ಮಿಕರ ವೇತನವನ್ನು ಜಾತಿವಾರು ವಿಂಗಡಣೆ ಮಾಡಿ ಸಂದಾಯ ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಕುರಿತು ಸರ್ಕಾರದ ನಿಲುವೇನು; (ವಿವರ ನೀಡುವುದು) | ರಾಜ್ಯದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೂಲಿ ಕಾರ್ಮಿಕರ ಕೂಲಿ ಪಾವತಿಗೆ ಸಂಬಂಧಿಸಿದಂತೆ, ಭಾರತ ಸರ್ಕಾರದ ಮಂತ್ರಾಲಯದ ಪತ್ರ ಸಂಖ್ಯೆ: -31011/13/2020- (371606) ದಿ: 11-03-2021ರ ಪತ್ರದನ್ವಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಎಂದು 3 ಬ್ಯಾಂಕ್ ಖಾತೆಗಳನ್ನು ತೆರೆದು ಕೂಲಿ ಮೊತ್ತವನ್ನು ಪಾವತಿ ಮಾಡಲಾಗುತ್ತಿದೆ. (ಸದರಿ ಪತ್ರದ ಪ್ರತಿ ಲಗತ್ತಿಸಿದೆ) |
| ಇ | ಸದರಿ ಯೋಜನೆಯಡಿಯಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳ ಖಾಲಿ ಸ್ಥಾನಗಳ ಭರ್ತಿ ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು; (ವಿವರ ನೀಡುವುದು) | ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ತಾಲ್ಲೂಕು ಮಟ್ಟದಲ್ಲಿ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಹುದ್ದೆಗಳನ್ನು ಸೃಜಿಸಲಾಗಿದೆ. ಸದರಿ ಹುದ್ದೆಗಳನ್ನು ಶೇ 100% ರಷ್ಟು ಪ್ರಮಾಣದಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯಿಂದ ಮುಂಬಡ್ತಿ ನೀಡಲು ಅವಕಾಶ ಕಲ್ಪಿಸಲಾಗಿದೆ. ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಜೇಷ್ಠತಾ ಪಟ್ಟಿಯನ್ನು ದಿನಾಂಕ: 21.2.2014 ರಂದು ಹೊರಡಿಸಿದ್ದು, ಸದರಿ ಜೇಷ್ಠತಾ ಪಟ್ಟಿಯನ್ನು ಪ್ರಶ್ನಿಸಿ, ಮಾನ್ಯ ಕರ್ನಾಟಕ ನ್ಯಾಯ ಮಂಡಳಿಯಲ್ಲಿ ದಾಖಲಾಗಿದ್ದ ಅರ್ಜಿ ಸಂಖ್ಯೆ: 2259-2261/2014 ತತ್ಸಂಬಂಧಿತ ಅರ್ಜಿಗಳಲ್ಲಿ ದಿನಾಂಕ: 18.03.2019ನ್ನು ಮಾನ್ಯ ನ್ಯಾಯ ಮಂಡಳಿಯು ತೀರ್ಪು ನೀಡಿ ದಿನಾಂಕ: 21.2.2014ರ ಜೇಷ್ಠತಾ ಪಟ್ಟಿಯನ್ನು ಹಾಗೂ ದಿನಾಂಕ: 28.12.2017ರ ಜೇಷ್ಠತಾ ಪಟ್ಟಿಯನ್ನು (ಮಾನ್ಯ ಸರ್ವೋಚ್ಚ ನ್ಯಾಯಾಲವು ಪವಿತ್ರ ಪ್ರಕರಣದಲ್ಲಿ ದಿನಾಂಕ: 09.2.2017 ರಂದು ನೀಡಿರುವ ತೀರ್ಪಿಗೆ ಅನುಗುಣವಾಗಿ ಹೊರಡಿಸಿದ್ದು) ರದ್ದುಪಡಿಸಿ, ಕರ್ನಾಟಕ ನಾಗರೀಕ ಸೇವಾ ಜೇಷ್ಠತಾ) ನಿಯಮಗಳು 1957ರ ನಿಯಮ 5 ಹಾಗೂ ಅದರ |

| | | |
|---|---|---|
| | | ಉಪಬಂಧನಳನುಸಾರ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಲು ನಿರ್ದೇಶನ ನೀಡಿತ್ತು, ರದ್ದುಗೊಂಡ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸುವವರಗೆ ಯಾವುದೇ ಮುಂಬಡ್ತಿಯನ್ನು ನೀಡತಕ್ಕದ್ದಲ್ಲ ಎಂದು ಸೂಚಿಸಿತ್ತು.<br>ಮಾನ್ಯ ಕೆ.ಎ.ಟಿಯ ಆದೇಶವನ್ನು ಪ್ರಶ್ನಿಸಿ, ಭಾದಿತರು ಹಾಗೂ ಸರ್ಕಾರವು (ಈಗಾಗಲೇ ಮುಂಬಡ್ತಿ ಪಡೆದವರು) ಮಾನ್ಯ ಉಚ್ಚ ನ್ಯಾಯಾಲಯ ಕಲಬುರಗಿ, ಬೆಂಗಳೂರು ಪೀಠದಲ್ಲಿ ವಿವಿಧ ರಿಟ್ ಅರ್ಜಿಗಳನ್ನು ಸಲ್ಲಿಸಿದ್ದು, ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 201903-906/2019 (ಕಲಬುರಗಿ ಪೀಠ) ತತ್ಸಂಬಂಧಿತ ಅರ್ಜಿಗಳಲ್ಲಿ ಯಥಾಸ್ಥಿತಿ ಕಾಯ್ದುಳ್ಳುವಂತೆ ನಿರ್ದೇಶನ ನೀಡಿರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶಗಳ ಹಿನ್ನಲೆಯಲ್ಲಿ ಮುಂಬಡ್ತಿ ನೀಡಲು ಅಥವಾ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ-32 ರಡಿ ಸ್ವತಂತ್ರ ಪ್ರಭಾರದಲ್ಲಿರಿಸಲು ಸಾಧ್ಯವಾಗಿರುವುದಿಲ್ಲ. |
| ಈ | ಖಾಲಿ ಹುದ್ದೆಗಳಿಂದ ಎಷ್ಟು ವರ್ಷಗಳಿಂದ ಪ್ರಕರಣಗಳು ಬಾಕಿ ಉಳಿದಿರುಲು ಕಾರಣವೇನು; (ವಿವರ ನೀಡುವುದು) ಈ ವಿಳಂಬಕ್ಕೆ ಸರ್ಕಾರದ ಮೃದು ಧೋರಣೆಯ ಕಾರಣವೇ? (ವಿವರ ನೀಡುವುದು) | ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ದಿನಾಂಕ: 18.3.2019 ರಂದು ತೀರ್ಮ ನೀಡಿದ್ದು, ಅದೇ ವರ್ಷಗಳಲ್ಲಿ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿಗಳನ್ನು ದಾಖಲಾಗಿ, ಮಧ್ಯಂತರ ತೀರ್ಮಗಳು ಹೊರಬಿದ್ದಿರುತ್ತವೆ. ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯ ಆಡಳಿತಾತ್ಮಕ ಹಿತದೃಷ್ಟಿಯಿಂದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಸ್ವತಂತ್ರ ಪ್ರಭಾರದಲ್ಲಿರಿಸುವ ಕುರಿತು ಅನುಮತಿ ಕೋರಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಮಧ್ಯಂತರ ಅರ್ಜಿ ಸಂಖ್ಯೆ: 01/2020 (201903-906/2019) ಮತ್ತು 03/2020 (33613/2019)ಗಳನ್ನು ದಾಖಲಿಸಲಾಗಿತ್ತು. ಮಾನ್ಯ ಉಚ್ಚ ನ್ಯಾಯಾಲಯವು ಸದರಿ ಮಧ್ಯಂತರ ಅರ್ಜಿಗಳನ್ನು ದಿನಾಂಕ: 09.07.2020ರ ಆದೇಶದಲ್ಲಿ ವಜಾಗೊಳಿಸಿರುತ್ತದೆ. ದಿನಾಂಕ: 09.07.2020ರ ಅದೇಶವನ್ನು ಮನರ್ ಪರಿಶೀಲಿಸುವಂತೆ ಕೋರಿ ಮನರ್ ಪರಿಶೀಲನಾ ಅರ್ಜಿ ಸಂಖ್ಯೆ: 200024/2020 ನ್ನು ದಾಖಲಿಸಲಾಗಿತ್ತು. ಸದರಿ ಪ್ರಕರಣದಲ್ಲಿಯೂ ಸರ್ಕಾರಕ್ಕೆ ಸಕರಾತ್ಮಕವಾಗಿ ತೀರ್ಮ ಬಂದಿರುವುದಿಲ್ಲ. ದಿನಾಂಕ: 09.07.2020ರ ಆದೇಶ ಹಾಗೂ ಮನರ್ ಪರಿಶೀಲನಾ ಅರ್ಜಿಯಲ್ಲಿನ ದಿನಾಂಕ: 11.12.2020ರ ಆದೇಶಗಳನ್ನು ಪ್ರಶ್ನಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ ದಾಖಲಿಸಲು ಅವಶ್ಯಕ ಕ್ರಮಗಳನ್ನು ಕೈಗೊಳ್ಳಲಾಗಿದೆ. ಹಾಗಾಗಿ, ಸರ್ಕಾರವು ಮೃದು ಧೋರಣೆ ಅನುಸರಿಸುತ್ತದೆ ಎಂಬ ಪ್ರಶ್ನೆ ಉದ್ಭವವಾಗುವುದಿಲ್ಲ. |

ಸಂಖ್ಯೆ: ಗ್ರಾಅಪ 61(8) ಉಖಾಯೋ 2021

**(ಕೆ.ಎಸ್.ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು